ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

491 (677) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳಲ್ಲಿ ದಾಖಲಾತಿ ಮತ್ತು ಹಾಜರಾತಿ ವಿಭಾಗವಾರು ಹಾಗೂ ಮಂಜೂರಾಗಿರುವ ಹುದ್ದೆ ಖಾಲಿ ಹುದ್ದೆಗಳ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು; (ಬೋಧಕ ಮತ್ತು ಬೋಧಕೇತರ)

(ಆ) ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಪ್ರಸ್ತುತ ಖಾಲಿ ಹುದ್ದೆಗಳ ನಿರ್ವಹಣೆಗೆ ಯಾವ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ;

(ಇ) ನಾಗಮಂಗಲ ತಾಲ್ಲೂಕು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ತೆರೆಯುವ ಉದ್ದೇಶ ಸರ್ಕಾರದ ಮುಂದೆ ಇದೆಯೇ; ಹಾಗಿದ್ದಲ್ಲಿ, ಈ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಪ್ರಾರಂಭ ಮಾಡಲು ತೆಗೆದುಕೊಂಡ ಕ್ರಮಗಳೇನು?